# ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಗುಂಡ್ಲುಪೇಟೆ

## ಸಿ.ಸಿ. ಸಂಖ್ಯೆ: 492/2019

ಫ್ರಾಸಾ – 3

ಚಾಸಾ – 5

**ಸಾಕ್ಷಿಯು ದಿಃ 20.09.2025 ರಂದು ನ್ಯಾಯಾಲಯದಲ್ಲಿ ಹಾಜರಿದ್ದು ಪ್ರಮಾಣ ವಚನ ಭೋಧಿಸಲಾಯಿತು.**

| | | |
|---|---|---|
| ಹೆಸರು | : | ರಾಜಶೇಖರ ಮೂರ್ತಿ |
| ತಂದೆಯ ಹೆಸರು | : | ಗುರುಸ್ವಾಮಪ್ಪ |
| ವಯಸ್ಸು | : | 39 ವರ್ಷ |
| ವೃತ್ತಿ | : | ವ್ಯವಸಾಯ |
| ವಾಸಸ್ಥಳ | : | ಸಂಪಿಗೆಪುರ |

**ಮುಖ್ಯ ವಿಚಾರಣೆ :ಮಾನ್ಯ ಎಪಿಪಿಯವರಿಂದ :–**

ಚಾಸಾ 3 ಮತ್ತು 6 ಗೊತ್ತು, ನಮ್ಮೂರಿನವರು ಎಂದು ಸಾಕ್ಷಿಯು ಪಂಚನಾಮೆಯಲ್ಲಿ ತನ್ನ ಸಹಿ ನೋಡಿ ಗುರುತಿಸಿದ್ದು, ಪಂಚನಾಮೆಯನ್ನು ನಿಪಿ 3 ಎಂದು, ಸಾಕ್ಷಿಯ ಸಹಿಯನ್ನು ನಿಪಿ 3(ಎ) ಎಂದು ಗುರ್ತಿಸಲಾಯಿತು. ಸದರಿ ಸಹಿಯನ್ನು ಸುಮಾರು 5–6 ವರ್ಷಗಳ ಹಿಂದೆ ನಮ್ಮೂರಿನಲ್ಲಿ ಮಾಡಿದ್ದೇನೆ. ನಿಪಿ 3 ರಲ್ಲಿ ಬರೆದ ವಿಚಾರಗಳು ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ಯಾವುದೇ ಪಂಚನಾಮೆಯನ್ನು ಮಾಡಿಲ್ಲ.

(ಈ ಹಂತದಲ್ಲಿ ಮಾನ್ಯ ಎಪಿಪಿಯವರು ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು , ಅನುಮತಿ ನೀಡಲಾಗಿದೆ)

**ಪಾಟೀ ಸವಾಲು :- ಮಾನ್ಯ ಎಪಿಪಿಯವರಿಂದ :-**

ದಿಃ 24.10.2019 ರಂದು ಚಾಸಾ 3 ತೋರಿಸಿದ ಸ್ಥಳದಲ್ಲಿ ಚಾಸಾ 6 ಮತ್ತು ನನ್ನ ಸಮಕ್ಷಮ ಪೊಲೀಸರು ನಿಪಿ 3 ರಂತೆ ಪಂಚನಾಮೆ ಜರುಗಿಸಿ 6 ಅಡಿ ಉದ್ದದ ಫೆನ್ಸಿಂಗ್ ತಂತಿಯನ್ನು ಅಮಾನತ್ತು ಪಡಿಸಿಕೊಂಡು ಸ್ಥಳದಲ್ಲಿ ನಮ್ಮ ಸಹಿ ಪಡೆದುಕೊಂಡಿರುತ್ತಾರೆ ಎಂದರೆ ಸರಿಯಲ್ಲ. ನಿಪಿ 3 ರ ವಿಚಾರಗಳು ಗೊತ್ತಿದ್ದರು ಸಹ ಸುಳ್ಳು ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿಗಳ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ತಿಳಿಸಿರುತ್ತಾರೆ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಸಾಕ್ಷಿಯ ಹೇಳಿಕೆಯನ್ನು ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸ ಇ ಎ ಒ

(ಶ್ರೀ. ದೀಪು ಎಂ.ಟಿ.)
ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ,
ಗುಂಡ್ಲುಪೇಟೆ